**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

ದಿನಾಂಕಃ 30ನೇ ಜುಲೈ ತಿಂಗಳು 2025 ರಂದು

**ಸಿಸಿ ನಂ.496/2023**

**ಫಿರ್ಯಾದುದಾರಃ** ಶಿವಣ್ಣಚಾರ್.ಕೆ.,ಬಿನ್ ಲೇಟ್ ಕಾಳಾಚಾರಿ,
ವಯಸ್ಸು ಸುಮಾರು 47 ವರ್ಷ,
ವಾಸಃ ಬಸವಗುಡಿ ಬೀದಿ, ಕಲ್ಕುಣಿಕೆ,
ಹುಣಸೂರು ಟೌನ್, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಜಯಮ್ಮ, ಕೋಂ ಕಾಳಾಚಾರ್,
ವಯಸ್ಸು ಸುಮಾರು 45 ವರ್ಷ,
ವಾಸಃ ಕಾಮಗೌಡನಹಳ್ಳಿ ಗ್ರಾಮ,
ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು ,
ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 251 ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದುದಾರರಾದ ಶಿವಣ್ಣಚಾರ್.ಕೆ. ರವರು ಹಲವಾರು ವರ್ಷಗಳಿಂದಲೂ ಪರಿಚಯಸ್ಥರಾಗಿದ್ದು, ಸದರಿ ಪರಿಚಯದ ಆಧಾರದ ಮೇಲೆ ನೀವು ಫಿರ್ಯಾದುದಾರರಿಂದ ನಿಮ್ಮ ಕಾನೂನು ಬದ್ದ ಅವಶ್ಯಕತೆಗಾಗಿ ಅಂದರೆ ಕೈ ಸಾಲವನ್ನು ತೀರಿಸುವ ಸಲುವಾಗಿ ರೂ.1,20,000/–ಗಳನ್ನು ದಿನಾಂಕ 07.01.2023 ರಂದು ಅಲ್ಪಾವಧಿಯೊಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ತೀರುವಳಿಗಾಗಿ ದಿನಾಂಕಃ 10.03.2023 ರಂದು ಪಾವತಿಯಾಗುವಂತೆ ಹೆಚ್.ಡಿ.ಎಫ್.ಸಿ.ಬ್ಯಾಂಕ್, ಹುಣಸೂರು ಶಾಖೆಯ ಚೆಕ್ ಸಂಖ್ಯೆ 000005 ಅನ್ನು ರೂ.1,20,000/–ಗಳಿಗೆ ನೀಡಿದ್ದು, ಅದನ್ನು ಫಿರ್ಯಾದಿದಾರರು

ತಮ್ಮ ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಹುಣಸೂರು ಶಾಖೆಯ ಮೂಲಕ ದಿನಾಂಕಃ 31.05.2023 ರಂದು ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "Account blocked situation covered in 2125" ಎಂಬ ಕಾರಣಕ್ಕಾಗಿ ಸದರಿ ಚೆಕ್ ದಿನಾಂಕ:02.06.2023 ರ ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದುದಾರರು ದಿನಾಂಕ: 01.07.2023 ರಂದು ತಮ್ಮ ವಕೀಲರ ಮೂಲಕ ನೋಂದಾಯಿತ ಅಂಚೆಯಲ್ಲಿ ನಿಮ್ಮ ವಿಳಾಸಕ್ಕೆ ನೋಟೀಸು ನೀಡಿದ್ದು, ಸದರಿ ನೋಟೀಸು ನಿಮಗೆ ದಿನಾಂಕಃ 05.07.2023 ರಂದು ಜಾರಿಯಾಗಿದ್ದು, ಈ ಬಗ್ಗೆ ನಿಮಗೆ ಮಾಹಿತಿ ಇದ್ದರೂ ಕೂಡ ನೀವು ಚೆಕ್ ನಲ್ಲಿ ನಮೂದಿಸಿದ ಹಣವನ್ನಾಗಲೀ ನೋಟೀಸಿಗೆ ಉತ್ತರವನ್ನಾಗಲೀ ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ 138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ANITHA Digitally signed by ANITHA Date: 2025.07.30 17:34:44 +0530

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ